## ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 1071 |
| ಮಾನ್ಯ ಸದಸ್ಯರ ಹೆಸರು | ಡಾ: ವೈ.ಎ. ನಾರಾಯಣಸ್ವಾಮಿ (ಶಿಕ್ಷಕರ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | 22.12.2021 |
| ಉತ್ತರಿಸುವ ಸಚಿವರು | ವಸತಿ ಮತ್ತು ಮೂಲಸೌಲಭ್ಯ ಅಭಿವೃದ್ಧಿ ಸಚಿವರು |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ | ಕರ್ನಾಟಕ ಗೃಹ ಮಂಡಳಿಯಿಂದ ಕಳೆದ 5 ವರ್ಷಗಳಲ್ಲಿ ಎಷ್ಟು ಜನರಿಗೆ ವಸತಿ ಹಂಚಿಕೆ ಮಾಡಲಾಗಿದೆ; | ಕರ್ನಾಟಕ ಗೃಹ ಮಂಡಳಿಯಿಂದ ಕಳೆದ 5 ವರ್ಷಗಳಲ್ಲಿ 2948 ಜನರಿಗೆ ವಸತಿ (ಮನೆ/ನಿವೇಶನಗಳು) ಹಂಚಿಕೆ ಮಾಡಲಾಗಿದೆ. |
| ಆ | ಗೃಹ ಮಂಡಳಿ ನಿರ್ಮಿಸಿರುವ ಮನೆಗಳು ಉತ್ತಮ ಗುಣಮಟ್ಟದಿಂದ ಕೂಡಿರುವುದಿಲ್ಲ ಎಂಬ ಭಾವನೆ ಜನರಲ್ಲಿದ್ದು, ಇದರಿಂದ ಈ ಮನೆಗಳನ್ನು ಖರೀದಿಸಲು ಜನ ಮುಂದೆ ಬರುತ್ತಿಲ್ಲವೆಂಬುದು ನಿಜವಲ್ಲವೆ; | ಕರ್ನಾಟಕ ಗೃಹ ಮಂಡಳಿಯು ರಾಜ್ಯಾದ್ಯಂತ ನಿರ್ಮಿಸಿರುವ ಮನೆಗಳು ಉತ್ತಮ ಗುಣಮಟ್ಟದಿಂದ ಕೂಡಿದ್ದು, ಸಾರ್ವಜನಿಕರಿಂದ ಸಾಕಷ್ಟು ಬೇಡಿಕೆ ಇರುತ್ತದೆ. |
| ಇ | ಉತ್ತಮ ಗುಣಮಟ್ಟದ ಮನೆಗಳನ್ನು ನಿರ್ಮಿಸಿ ಜನರಲ್ಲಿ ಆತ್ಮವಿಶ್ವಾಸವನ್ನು ತುಂಬಲು ಸರ್ಕಾರ ಯಾವ ಕ್ರಮ ಕೈಗೊಂಡಿದೆ? (ವಿವರ ನೀಡುವುದು) | ಕರ್ನಾಟಕ ಗೃಹ ಮಂಡಳಿಯು ಉತ್ತಮ ಗುಣಮಟ್ಟದ ಮನೆಗಳನ್ನು ನಿರ್ಮಿಸುತ್ತಿರುವುದರಿಂದ ಸದರಿ ಪ್ರಶ್ನೆ ಉದ್ಭವಿಸುವುದಿಲ್ಲ. |

(ಸಂಖ್ಯೆ: ವಇ 195 ಕಗೃಮಂ 2021)

(ವಿ. ಸೋಮಣ್ಣ)
ವಸತಿ ಮತ್ತು ಮೂಲಸೌಲಭ್ಯ
ಅಭಿವೃದ್ಧಿ ಸಚಿವರು